**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1104/2025**

| | | |
|---|---|---|
| ಸಾಕ್ಷಿದಾರರ ಹೆಸರು | : ಕಾರ್ತಿಕ್ ಎಂ.ಎನ್. | ಫ್ರಾಸಾ-2 |
| ತಂದೆಯ ಹೆಸರು | : ನಾಗೇಶ್ | ಚಾಸಾ-2 |
| ವಯಸ್ಸು | : 33 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 29.12.2025 |
| ವಾಸಸ್ಥಳ | : ಮಾಕೋನಹಳ್ಳಿ | |

**:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ನನಗಿದೆ. ಅವರು ನಮ್ಮ ಊರಿನವರು. ಚಾಸಾ-3 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-1 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-2 ಮತ್ತು 3 ರ ಫೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಮಹಜರ್ ನಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಎಂ.ಒ.1 ಮತ್ತು 2 ನ್ನು ನೋಡಿ ಅವುಗಳ ಬಗ್ಗೆ ತನಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಎಂ.ಒ.1 ರ ಮೇಲಿನ ಸಾಕ್ಷಿಯ ಸಹಿಯನ್ನು ಎಂ.ಒ.1(ಬಿ) ಎಂದು ಗುರುತಿಸಲಾಯಿತು.

11 ತಿಂಗಳ ಹಿಂದೆ ನಾನು ಮತ್ತು ಚಾಸಾ-3 ರವರು ಮಾಕೋನಹಳ್ಳಿಯಲ್ಲಿ ಇರುವಾಗ ಪೋಲಿಸರು ನಮ್ಮ ಸಹಿಗಳನ್ನು ಪಡೆದು, ಪೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಪೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾವು ಸಹಿ ಮಾಡುವ ಕಾಲಕ್ಕೆ ಎಂ.ಒ.1 ಮತ್ತು 2 ರ ವಸ್ತುವನ್ನು ನೋಡಿಲ್ಲ. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

ಈಗ ಓದಿ ಹೇಳಿದಂತೆ ದಿ.18.01.2025 ರಂದು ಮೂಡಿಗೆರೆ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**
**<u>ಸಿ.ಸಿ.1104/2025</u>**

| | | |
|---|---|---|
| ಸಾಕ್ಷಿದಾರರ ಹೆಸರು | : ಗಣೇಶ್ | ಫ್ರಾಸಾ-1 |
| ತಂದೆಯ ಹೆಸರು | : ಸೋಮಯ್ಯ | ಚಾಸಾ-3 |
| ವಯಸ್ಸು | : 39 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 29.12.2025 |
| ವಾಸಸ್ಥಳ | : ಮಾಕೋನಹಳ್ಳಿ | |

**<u>:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ನನಗಿದೆ. ಅವರು ನಮ್ಮ ಊರಿನವರು. ಚಾಸಾ-2 ರವರ ಪರಿಚಯ ನನಗಿದೆ.

ಸಾಕ್ಷಿಯು ದಿ.17.01.2025 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ಎರಡು ಫೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಮಹಜರ್ ನ್ನು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ-1(ಎ), ಫೋಟೋಗಳನ್ನು ಸಿಡಿ ಮತ್ತು ಪ್ರಮಾಣಪತ್ರದೊಂದಿಗೆ ನಿಪಿ-2 ರಿಂದ 5 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಪ್ಲಾಸ್ಟಿಕ್ ಚೀಲದ ಮೇಲೆ ತಮ್ಮ ಸಹಿಯನ್ನು ಗುರುತಿಸಿ, ಸದರಿ ಚೀಲದೊಳಗಿರುವ ಟೆಟ್ರಪ್ಯಾಕ್ ಗಳ ಬಗ್ಗೆ ತನಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಚೀಲ ಮತ್ತು ಬಟ್ಟೆಯ ಬ್ಯಾಗ್ ನ್ನು ಒಟ್ಟಾಗಿ ಎಂ.ಒ.1, ಸಾಕ್ಷಿಯ ಸಹಿಯನ್ನು ಎಂ.ಒ.1(ಎ), ಟೆಟ್ರಪ್ಯಾಕ್ ಗಳನ್ನು ಒಟ್ಟಾಗಿ ಎಂ.ಒ.2 ಎಂದು ಗುರುತಿಸಲಾಯಿತು.

11 ತಿಂಗಳ ಹಿಂದೆ ನಾನು ಮತ್ತು ಚಾಸಾ-2 ರವರು ಮಾಕೋನಹಳ್ಳಿಯಲ್ಲಿ ಇರುವಾಗ ಪೋಲಿಸರು ನಮ್ಮ ಸಹಿಗಳನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾವು ಸಹಿ ಮಾಡುವ ಕಾಲಕ್ಕೆ ಎಂ.ಒ.1 ಮತ್ತು 2 ರ ವಸ್ತುವನ್ನು ನೋಡಿಲ್ಲ. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:</u>**

ಈಗ ಓದಿ ಹೇಳಿದಂತೆ ದಿ.18.01.2025 ರಂದು ಮೂಡಿಗೆರೆ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.